ಕರ್ನಾಟಕ ಸರ್ಕಾರ

**ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-1**

ಸಂಖ್ಯೆ:ಸಿ4(6)ಸಪ್ರೌಶಾ/ಶಾ.ಕಾ.ಪ್ರ-23/2020-21 ದಿನಾಂಕ:30.12.2020

-:ಜ್ಞಾಪನಾ:-

ವಿಷಯ:-ದಿನಾಂಕ:01.01.2021 ರಿಂದ 10ನೇ ತರಗತಿ ವಿದ್ಯಾರ್ಥಿಗಳಿಗೆ ಶಾಲೆ ಪ್ರಾರಂಭ ಹಾಗೂ 6-9ನೇ ತರಗತಿ ವಿದ್ಯಾರ್ಥಿಗಳಿಗೆ ವಿದ್ಯಾಗಮ ಪುನಾರಾರಂಭ ಕಾರ್ಯಕ್ರಮದಲ್ಲಿ ಹಾಜರಾದ ವಿದ್ಯಾರ್ಥಿಗಳ ಹಾಜರಾತಿ ವಿವರಗಳನ್ನು ಎಸ್.ಎ.ಟಿ.ಎಸ್ ತಂತ್ರಾಂಶದಲ್ಲಿ ದಾಖಲಿಸುವ ಬಗ್ಗೆ.

ಉಲ್ಲೇಖ:-01.ಈ ಕಛೇರಿಯ ಪತ್ರದ ಸಂಖ್ಯೆ:ಸಿ4(6) ಸ.ಪ್ರೌ.ಶಾ/ಶಾ.ಕಾ.ಪ್ರ-23/2020-21 ದಿನಾಂಕ:23.12.2020.

02.ಈ ಕಛೇರಿಯ ಪತ್ರದ ಸಂಖ್ಯೆ:ಸಿ4(6) ಸ.ಪ್ರೌ.ಶಾ/ಶಾ.ಕಾ.ಪ್ರ-23/2020-21 ದಿನಾಂಕ:23.12.2020.

&&&&&&

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ರಾಜ್ಯದಲ್ಲಿ ದಿನಾಂಕ:01.01.2021ರಿಂದ 10ನೇ ತರಗತಿಯ ಪ್ರಾರಂಭ ಹಾಗೂ 6 ರಿಂದ 9ನೇ ತರಗತಿ ವಿದ್ಯಾರ್ಥಿಗಳಿಗೆ ವಿದ್ಯಾಗಮ ಕಾರ್ಯಕ್ರಮವನ್ನು ಪುನರಾರಂಭಿಸುವ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳ ಹಾಜರಾತಿಯ ವಿವರವನ್ನು ಎಸ್.ಎ.ಟಿ.ಎಸ್ ತಂತ್ರಾಂಶದಲ್ಲಿ ಪ್ರತಿನಿತ್ಯ ದಾಖಲಿಸಲು ಅವಕಾಶವಿರುತ್ತದೆ. ಆದ್ದರಿಂದ ಕಡ್ಡಾಯವಾಗಿ ಎಲ್ಲಾ ಸರ್ಕಾರಿ/ಅನುದಾನಿತ/ಅನುದಾನರಹಿತ ಶಾಲೆಗಳ ಮುಖ್ಯ ಶಿಕ್ಷಕರುಗಳು ಶಾಲಾ ಆವರಣದಲ್ಲಿ ಹಾಜರಾದ ವಿದ್ಯಾರ್ಥಿಗಳ ಮಾಹಿತಿಯನ್ನು ಮತ್ತು ಆನ್ ಲೈನ್‌ನಲ್ಲಿ ಹಾಜರಾದ ವಿದ್ಯಾರ್ಥಿಗಳ ಹಾಜರಾತಿಯ ವಿವರವನ್ನು ಎಸ್.ಎ.ಟಿ.ಎಸ್ ತಂತ್ರಾಂಶದ ಮೊಬೈಲ್ ಆಪ್ ಮೂಲಕ ಅಥವಾ ಕಂಪ್ಯೂಟರ್ ತಂತ್ರಾಂಶದ ಮೂಲಕ ಆಯಾ ದಿನದಂದು ಹಾಜರಾತಿ ಪಡೆದ ತಕ್ಷಣ ದಾಖಲಿಸಲು ಕ್ರಮ ಕೈಗೊಳ್ಳಲು ತಿಳಿಸಿದೆ.

ದಿನಾಂಕ:01.01.2021 ರಿಂದ 10 ನೇ ತರಗತಿಯನ್ನು ಪ್ರಾರಂಭಿಸುವ ಹಾಗೂ 6 ರಿಂದ 9ನೇ ತರಗತಿ ವಿದ್ಯಾರ್ಥಿಗಳಿಗೆ ವಿದ್ಯಾಗಮ ಕಾರ್ಯಕ್ರಮವನ್ನು ಪುನರಾರಂಭಿಸುವ ಹಿನ್ನೆಲೆಯಲ್ಲಿ ಸದರಿ ಕಾರ್ಯಕ್ರಮಗಳ ಯಶೋಗಾಥೆಯ ವಿವರವನ್ನು ಭಾವಚಿತ್ರದೊಂದಿಗೆ ಇಲಾಖಾ ಅಧಿಕಾರಿಗಳ ವಾಟ್ಸ್ ಆಪ್ ಗ್ರೂಪ್‌ಗೆ ಮತ್ತು ಈ ಕಛೇರಿಯ ಇ-ಮೇಲ್ ವಿಳಾಸ: est4cpibng@gmail.com ಗೆ ದಿನಾಂಕ: 01/01/2021 ರ ಅಪರಾಹ್ನ 3.00 ಗಂಟೆಗೆ ಸಲ್ಲಿಸಲು ತಿಳಿಸಿದೆ.

ನಿರ್ದೇಶಕರು(ಪ್ರೌಢ ಶಿಕ್ಷಣ)

ಇವರಿಗೆ:-

01. ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ ಮತ್ತು ಅಭಿವೃದ್ಧಿ), ಸಾರ್ವಜನಿಕ ಶಿಕ್ಷಣ ಇಲಾಖೆ ಇವರಿಗೆ ಕಳುಹಿಸುತ್ತಾ ಕ್ರಮವಹಿಸಲು ತಿಳಿಸಿದೆ.
02. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಉಪನಿರ್ದೇಶಕರು (ಆಡಳಿತ ಮತ್ತು ಅಭಿವೃದ್ಧಿ) ರವರ ಮೂಲಕ ಮುಂದಿನ ಕ್ರಮಕ್ಕಾಗಿ.

ಪ್ರತಿಯನ್ನು:

01. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು ರವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.
02. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ರವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.
03. ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ ರವರಿಗೆ ಗೌರವಪೂರ್ವಕವಾಗಿ ಮಾಹಿತಿಗಾಗಿ ಸಲ್ಲಿಸಿದೆ.
04. ಮಾನ್ಯ ರಾಜ್ಯ ಯೋಜನಾ ನಿರ್ದೇಶಕರು ಎಸ್.ಎಸ್.ಕೆ ನೃಪತುಂಗ ರಸ್ತೆ, ಬೆಂಗಳೂರು ರವರಿಗೆ ಸಲ್ಲಿಸುತ್ತಾ ಎಸ್.ಎ.ಟಿ.ಎಸ್ ತಂತ್ರಾಂಶದಲ್ಲಿ ವಿದ್ಯಾರ್ಥಿಗಳ ಹಾಜರಾತಿಯನ್ನು ದಾಖಲಿಸಲು ಅವಕಾಶ ಕಲ್ಪಿಸುವಂತೆ ಕೋರಿದೆ.
05. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ / ಕಲಬುರಗಿ ರವರಿಗೆ ಸೂಕ್ತ ಕ್ರಮಕ್ಕಾಗಿ
06. ಕಛೇರಿ ಪ್ರತಿ

Scanned with CamScanner